**<u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.</u>**

**<u>ಸಿಸಿ ನಂಃ 49/2022</u>**

| | | |
|---|---|---|
| ಹೆಸರು | ಬೋರೇಗೌಡ | ಸಿ.ಡಬ್ಲ್ಯೂ 4 |
| ತಂದೆಯ ಹೆಸರು | ಲಿಂಗೇಗೌಡ | ಪಿ.ಡಬ್ಲ್ಯೂ 4 |
| ವಯಸ್ಸು | 59 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ ಸ್ಥಳ | ತಮ್ಮಡಹಳ್ಳಿ ಗ್ರಾಮ | |

ಸಾಕ್ಷಿಗೆ ದಿನಾಂಕಃ 12.08.2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆಃ ಎ ಪಿ ಪಿ ರವರಿಂದ ಃ</u>**

ನಾನು ಈಗ ನೋಡುತ್ತಿರುವ ನಿಪಿ-3 ಮತ್ತು ಮತ್ತೊಂದು ದಾಖಲೆಗೆ ಪೋಲೀಸ್ ಠಾಣೆಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿದ್ದು, ಯಾವ ಉದ್ದೇಶದಿಂದ ಸಹಿ ಪಡೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ನಿಪಿ-3 ರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-3ಬಿ ಎಂದು ಗುರುತಿಸಲಾಯಿತು. ಮತ್ತೊಂದು ದಾಖಲೆಯು ಶವ ತನಿಖಾ ವರದಿ ಅಗಿದ್ದು, ಅದನ್ನು ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5ಎ ಎಂದು ಗುರುತಿಸಲಾಯಿತು. ನಿಪಿ-3 ಮತ್ತು 5 ರಲ್ಲಿ ಏನೂ ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ.

**ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.**

**<u>ಪಾಟೀ ಸವಾಲುಃ ಎ ಪಿ ಪಿ ರವರಿಂದ ಃ</u>**

ದಿನಾಂಕ 17.10.2021 ರಂದು ಅಪಘಾತದ ಸಂಬಂದವಾಗಿ ಪೋಲೀಸರು ನಿಪಿ-3 ರಂತೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ರೀತಿ ನಿಪಿ-5 ರಂತೆ ಶವ ತನಿಖೆ

ಮಾಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಃಆರೋಪಿ ಪರ ವಕೀಲರಿಂದ**

ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.